(ಇ) 2450 ಉಪನ್ಯಾಸಕರ ಹುದ್ದೆಗಳಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ಅಂತಿಮ ಆಯ್ಕೆ ಪಟ್ಟಿ ಬಂದ ತಕ್ಷಣವೇ ಕೌನ್ಸಿಲಿಂಗ್ ಮೂಲಕ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ 1246 ಉಪನ್ಯಾಸಕರ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೌನ್ಸಿಲಿಂಗ್ ಮೂಲಕ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಬೋಧಕೇತರ ಸಿಬ್ಬಂದಿ ನೇಮಕಾತಿಗೆ ಸಂಬಂಧಪಟ್ಟಂತೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ಅಂತಿಮ ಆಯ್ಕೆ ಪಟ್ಟಿಯನ್ನು ಪಡೆದ ನಂತರ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

54 (152) ಶ್ರೀ ನಾಯ್ಕ ಜೆ.ಡಿ. :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭಟ್ಕಳ ವಿಧಾನ–ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಹಿಂದಿನ ಸರ್ಕಾರ ಎಷ್ಟು ಪದವಿ ಕಾಲೇಜುಗಳನ್ನು ಮಂಜೂರು ಮಾಡಿದೆ;

(ಆ) ಈ ಕಾಲೇಜಿಗೆ ಮಂಜೂರು ಮಾಡಿದ ಉಪನ್ಯಾಸಕರು ಹಾಗೂ ಸಿಬ್ಬಂದಿ ಸಂಖ್ಯೆ ಎಷ್ಟು;

(ಇ) ಎಷ್ಟು ಸಿಬ್ಬಂದಿ ಹಾಗೂ ಉಪನ್ಯಾಸಕರ ಹುದ್ದೆ ಖಾಲಿ ಇದೆ;

(ಈ) ಸಿಬ್ಬಂದಿ ಹಾಗೂ ಉಪನ್ಯಾಸಕರ ಖಾಲಿ ಹುದ್ದೆಯಿಂದ ಮಕ್ಕಳ ಶಿಕ್ಷಣದ ಮೇಲೆ ಪರಿಣಾಮ ಬೀರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಕಾಲೇಜಿಗೆ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಈ ಕಾಲೇಜಿಗೆ ಎಂದಿನಿಂದ ಹೊಸ ಕಟ್ಟಡ ನಿರ್ಮಿಸಲಾಗುವುದು?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :–

(ಅ) 01;

(ಆ) ಪ್ರಾಂಶುಪಾಲರು; 01

ಉಪನ್ಯಾಸಕರು 12

ದೈಹಿಕ ಶಿಕ್ಷಣ ಬೋಧಕರು 01

ಗ್ರಂಥಪಾಲಕರು 01

ಅಧೀಕ್ಷಕರು	01	
ಪ್ರಥಮ ದರ್ಜೆ ಸಹಾಯಕರು	01	
ಬೆರಳಚ್ಚುಗಾರರು	01	
ಗ್ರಂಥಾಲಯ ಸಹಾಯಕರು	03	
ಅಟೆಂಡರ್	03	ಮತ್ತು
ಪರಿಚಾರಕರು	03	

(ಇ)

ಉಪನ್ಯಾಸಕರು;	12	
ದೈಹಿಕ ಶಿಕ್ಷಣ ಬೋಧಕರು	01	
ಗ್ರಂಥಪಾಲಕರು	01	
ಬೆರಳಚ್ಚುಗಾರರು	01	
ಗ್ರಂಥಾಲಯ ಸಹಾಯಕರು	03	
ಅಟೆಂಡರ್	03	
ಪರಿಚಾರಕರು	03	

(ಈ) ಹೌದು

(ಉ) ಹೌದು

(ಊ) ಸದರಿ ಕಾಲೇಜಿಗೆ 5.00 ಎಕರೆ ವಿಸ್ತೀರ್ಣದ ಭೂಮಿಯನ್ನು ಮಂಜೂರು ಮಾಡುವಂತೆ ಜಿಲ್ಲಾಧಿಕಾರಿ ಕಾರವಾರ ಇವರನ್ನು ಕೋರಲಾಗಿದ್ದು, ಜಿಲ್ಲಾಧಿಕಾರಿಗಳಿಂದ ನಿವೇಶನ ಮಂಜೂರಾದ ನಂತರ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

55 (153) ಶ್ರೀ ನಾಯ್ಕ ಜೆ.ಡಿ. (ಭಟ್ಕಳ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭಟ್ಕಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಹಿಂದೆ ಮಂಜೂರು ಮಾಡಿದ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳು ಎಷ್ಟು;

(ಆ) ಈ ಪ್ರೌಢಶಾಲೆಗೆ ಹಾಗೂ ಪದವಿ ಪೂರ್ವ ಕಾಲೇಜಿಗೆ ಮಂಜೂರಾದ ಶಿಕ್ಷಕರ ಹಾಗೂ ಸಿಬ್ಬಂದಿ ಎಷ್ಟು;